# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 981 |
| ಮಾನ್ಯ ಸದಸ್ಯರ ಹೆಸರು | ಡಾ|| ವೈ. ಎ. ನಾರಾಯಣಸ್ವಾಮಿ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14/12/2023 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಇಲಾಖೆಯಲ್ಲಿರುವ ಕಾರ್ಮಿಕ ಕಲ್ಯಾಣ ಮಂಡಳಿ ಅಸ್ತಿತ್ವದಲ್ಲಿದೆಯೇ; ಹಾಗಿದ್ದಲ್ಲಿ, ಅದರ ಧ್ಯೇಯೋದ್ದೇಶಗಳೇನು; | ಕಾರ್ಮಿಕ ಇಲಾಖೆಯಡಿಯಲ್ಲಿ ಬರುವ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯು 1969 ರಿಂದ ಅಸ್ತಿತ್ವದಲ್ಲಿರುತ್ತದೆ. ಈ ಮಂಡಳಿಯ ಕಾರ್ಮಿಕ ಕಲ್ಯಾಣ ನಿಧಿಗೆ ಸಂಘಟಿತ ಕಾರ್ಮಿಕರಿಂದ ರೂ.20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ.40/- ರಂತೆ ಹಾಗೂ ಸರ್ಕಾರದಿಂದ ಪ್ರತಿ ಕಾರ್ಮಿಕರಿಗೆ ರೂ.20/- ರಂತೆ ವಂತಿಗೆಯಾಗಿ ಪಾವತಿಸಲಾಗುತ್ತಿದೆ. ಕಾರ್ಮಿಕ ಕಲ್ಯಾಣ ನಿಧಿಯ ಮೊತ್ತವನ್ನು ಸಂಘಟಿತ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಕಲ್ಯಾಣ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ. ಪ್ರಸ್ತುತ ಸಂಘಟಿತ ಕಾರ್ಮಿಕರು ಮತ್ತು ಅವರ ಅವಲಂಬಿತರಿಗೆ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಯೋಜನೆಗಳ ಪೂರ್ಣ ವಿವರಗಳನ್ನು **ಅನುಬಂಧ-1 ರಲ್ಲಿ** ಲಗತ್ತಿಸಿದೆ.<br>1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನಸಹಾಯ<br>2) ಕಾರ್ಮಿಕರಿಗೆ ವೈದ್ಯಕೀಯ ನೆರವು<br>3) ಕಾರ್ಮಿಕರಿಗೆ ಅಪಘಾತ ಧನಸಹಾಯ<br>4) ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ<br>5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನಸಹಾಯ<br>6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ<br>7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೋಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ |
| ಆ) | ಕಳೆದ 5 ವರ್ಷಗಳಲ್ಲಿ ಧ್ಯೇಯೋದ್ದೇಶಗಳಿಗೆ ಮೀಸಲಿಟ್ಟಿರುವ ಅನುದಾನ ಎಷ್ಟು; ಬಿಡುಗಡೆ ಮಾಡಲಾಗಿರುವ ಅನುದಾನ ಮತ್ತು ಖರ್ಚು-ವೆಚ್ಚಗಳೆಷ್ಟು? (ವಿವರಗಳನ್ನು ನೀಡುವುದು) | ಕಳೆದ 5 ವರ್ಷಗಳಲ್ಲಿ ಮೀಸಲಿಟ್ಟಿರುವ, ಬಿಡುಗಡೆಯಾದ ಅಂಶದಾನ ಮತ್ತು ಕಲ್ಯಾಣ ಯೋಜನೆಗಳ ವೆಚ್ಚಗಳ ವಿವರಗಳನ್ನು **ಅನುಬಂಧ-2 ರಲ್ಲಿ** ಲಗತ್ತಿಸಿದೆ. |

**ಕಾಇ 556 ಎಲ್ ಇಟಿ 2023**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

# ಅನುಬಂಧ-1

<u>ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ವೈ.ಎ ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 981</u>

## ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ಯೋಜನೆಗಳ ವಿವರ;

ಕರ್ನಾಟಕ ರಾಜ್ಯದಲ್ಲಿ ಕಾರ್ಮಿಕರ ಕಲ್ಯಾಣವನ್ನು ಸಂವರ್ಧನಗೊಳಿಸುವುದಕ್ಕೆ ಹಣಕಾಸು ನೆರವು ಒದಗಿಸಲು ಮತ್ತು ಚಟುವಟಿಕೆಗಳನ್ನು ನಡೆಸುವುದಕ್ಕಾಗಿ ಒಂದು ನಿಧಿಯನ್ನು, ಕರ್ನಾಟಕ ಕಾರ್ಮಿಕ ಕಲ್ಯಾಣ ನಿಧಿ ಅಧಿನಿಯಮ, 1965ರ ಅಡಿಯಲ್ಲಿ ಸ್ಥಾಪಿಸಲಾಗಿದೆ. ಮಂಡಳಿಗೆ ವಂತಿಗೆ ಪಾವತಿಸುವ ವಿವಿಧ ಕ್ಷೇತ್ರಗಳಾದ ಕಾರ್ಖಾನೆಗಳು/ ಸಂಸ್ಥೆಗಳು/ ಪ್ಲಾಂಟೇಶನ್/ ಸಾರಿಗೆ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರ ಕ್ಷೇಮಾಭಿವೃದ್ಧಿಗಾಗಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಈ ಕೆಳಗಿನ ಯೋಜನೆಗಳು ಜಾರಿಯಲ್ಲಿರುತ್ತದೆ.

1. ಯೋಜನೆಯ ಸೌಲಭ್ಯ ಪಡೆಯಲು ಪ್ರತಿ ವರ್ಷ ಜನವರಿ 15 ರೊಳಗೆ ಕಾರ್ಮಿಕರು, ಮಾಲೀಕರು ರೂ.20:40 ಅನುಪಾತದಲ್ಲಿ ಒಬ್ಬ ಕಾರ್ಮಿಕನಿಗೆ ಒಟ್ಟು ರೂ.60/- ಗಳಂತೆ ವಂತಿಕೆಯನ್ನು ಕಾರ್ಮಿಕ ಕಲ್ಯಾಣ ನಿಧಿಗೆ ಪಾವತಿಸತಕ್ಕದ್ದು.

2. ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಪಡೆಯಲು ವಿದ್ಯಾರ್ಥಿಗಳು, ಶೈಕ್ಷಣಿಕ ಸಂಸ್ಥೆಗಳು, ಕಾರ್ಖಾನೆಗಳು/ ಸಂಸ್ಥೆಗಳು klwb.karnataka.gov.in ಇಲ್ಲಿ ನೊಂದಾಯಿಸಿ ಅನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕಾಗಿರುತ್ತದೆ.

3. ವಂತಿಕೆ ಪಾವತಿ ಮಾಡುವ ಸಂಸ್ಥೆಗಳು ಹಾಗೂ ಕಾರ್ಖಾನೆಗಳು klwb.karnataka.gov.in ಇಲ್ಲಿ ತಮ್ಮ ಸಂಸ್ಥೆಗಳನ್ನು ಆನ್‌ಲೈನ್ ಮೂಲಕ ನೊಂದಾಯಿಸಿ ವಂತಿಕೆ ಪಾವತಿ ಮಾಡಬೇಕಾಗಿರುತ್ತದೆ.

<u>ಈ ಕೆಳಗಿನ ಯೋಜನೆಗೆ ಮಾಸಿಕ ವೇತನ ರೂ. 35,000/- ಗಿಂತ ಮೀರಿರಬಾರದು</u>.

1. **ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ**: ಪ್ರೌಢಶಾಲೆ, (8 ರಿಂದ 10ನೇ ತರಗತಿವರೆಗೆ) ರೂ.6,000/, ಪಿಯುಸಿ/ಡಿಪ್ಲೊಮಾ/ಐಟಿಐ/ಟಿಸಿಹೆಚ್ ಶಿಕ್ಷಣಕ್ಕಾಗಿ ರೂ.8,000/-, ಪದವಿ ಶಿಕ್ಷಣಕ್ಕಾಗಿ ರೂ.10,000/, ಸ್ನಾತಕೋತ್ತರ ಶಿಕ್ಷಣಕ್ಕಾಗಿ ರೂ.12,000/-, ಇಂಜಿನೀಯರಿಂಗ್/ ವೈದ್ಯಕೀಯ ಶಿಕ್ಷಣಕ್ಕಾಗಿ ರೂ.20,000/-ಗಳ ಪ್ರೋತ್ಸಾಹ ಧನ ನೀಡಲಾಗುವುದು. **(ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾ / ಪ. ಪಂಗಡದ ವಿದ್ಯಾರ್ಥಿಗಳು ಶೇ.45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು)**

<u>ಈ ಕೆಳಗಿನ ಯೋಜನೆಗಳಿಗೆ ಮಾಸಿಕ ಸಂಬಳದ ಮಿತಿಯಿರುವುದಿಲ್ಲ. ವಯೋಮಿತಿ 18-60 ವರ್ಷ</u>

2. **ಕಾರ್ಮಿಕರಿಗೆ ವೈದ್ಯಕೀಯ ನೆರವು** : ಹೃದಯ ಶಸ್ತ್ರ ಚಿಕಿತ್ಸೆ, ಕಿಡ್ನಿ ಟ್ರಾನ್ಸ್‌ಪ್ಲಾಂಟೇಷನ್, ಕ್ಯಾನ್ಸರ್, ಆಂಜಿಯೋಪ್ಲಾಸ್ಟಿ, ಕಣ್ಣು, ಅರ್ಥೋಪೆಡಿಕ್, ಗರ್ಭಕೋಶದ ಶಸ್ತ್ರ ಚಿಕಿತ್ಸೆ, ಗಾಲ್ ಬ್ಲಾಡರ್ ತೊಂದರೆ, ಮೆದುಳಿನ ರಕ್ತಸ್ರಾವ ಚಿಕಿತ್ಸೆಗೆ ಕನಿಷ್ಠ ರೂ.1,000/-ದಿಂದ ಗರಿಷ್ಠ ರೂ.25,000/-ವರೆಗೆ ಮತ್ತು ಆರೋಗ್ಯ ತಪಾಸಣೆಗೆ ರೂ.500/- ರಿಂದ ರೂ.1000/- ವರೆಗೆ ಧನ ಸಹಾಯ ನೀಡಲಾಗುವುದು.

3. **ಕಾರ್ಮಿಕರಿಗೆ ಅಪಘಾತ ಧನ ಸಹಾಯ** : ಕಾರ್ಮಿಕರಿಗೆ ಕೆಲಸದ ಸ್ಥಳದಲ್ಲಿ ಅಪಘಾತವಾದಲ್ಲಿ ಕನಿಷ್ಠ ರೂ.1,000/- ಗರಿಷ್ಠ ರೂ.10,000/- ವರೆಗೆ ಧನ ಸಹಾಯ ನೀಡಲಾಗುವುದು. ಸೌಲಭ್ಯ ಪಡೆಯುವ ಕಾರ್ಮಿಕರು ಅಪಘಾತವಾದ ಮೂರು ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

4. **ಹೆರಿಗೆ ಭತ್ಯೆ ಸೌಲಭ್ಯ** : ಮಹಿಳಾ ಕಾರ್ಮಿಕರಿಗೆ ಮೊದಲ 2 ಮಕ್ಕಳಿಗೆ ಮಾತ್ರ ಹೆರಿಗೆ ಭತ್ಯೆ ಸೌಲಭ್ಯವನ್ನು ತಲಾ ರೂ.10,000/- ಧನ ಸಹಾಯ ನೀಡಲಾಗುವುದು. ಮಗು ಜನಿಸಿದ 6 ತಿಂಗಳೊಳಗೆ ಅರ್ಜಿ ಸಲ್ಲಿಸತಕ್ಕದ್ದು.

5. **ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ**: ಈ ಯೋಜನೆಯ ಸೌಲಭ್ಯ ಪಡೆಯಲು ಮೃತರ ಕುಟುಂಬದ ಅವಲಂಬಿತರು ಕಾರ್ಮಿಕ ಮೃತಪಟ್ಟ 6 ತಿಂಗಳೊಳಗೆ ನಿಗಧಿತ ಅರ್ಜಿ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದಲ್ಲಿ, ರೂ.10,000/- ಧನ ಸಹಾಯ ನೀಡಲಾಗುವುದು.

6. **ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ** : ನೋಂದಾಯಿತ ಕಾರ್ಮಿಕ ಸಂಘಟನೆಗಳು/ ಸರ್ಕಾರೇತರ ಸಂಸ್ಥೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ಹಮ್ಮಿಕೊಳ್ಳುವ ವಾರ್ಷಿಕ ಆರೋಗ್ಯ ತಪಾಸಣೆ ಶಿಬಿರಕ್ಕೆ ರೂ.1,00,000/- ಧನ ಸಹಾಯ ನೀಡಲಾಗುವುದು.

7. **ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ** : ನೋಂದಾಯಿತ ಕಾರ್ಮಿಕ ಸಂಘಟನೆಗಳು ಕಲ್ಯಾಣ ಆಯುಕ್ತರ ಪೂರ್ವಾನುಮತಿಯೊಂದಿಗೆ ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಂಡಲ್ಲಿ ರೂ. 1,00,000/- ಧನ ಸಹಾಯ ನೀಡಲಾಗುವುದು.

**ಧನ ಸಹಾಯವನ್ನು ಫಲಾನುಭವಿಗಳ ಉಳಿತಾಯ ಖಾತೆಗೆ ನೇರವಾಗಿ ಆರ್.ಟಿ.ಜಿ.ಎಸ್. ಮೂಲಕ ಜಮಾಮಾಡಲಾಗುವುದು.**

# ಅನುಬಂಧ-2

<u>ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ವೈ.ಎ ನಾರಾಯಣಸ್ವಾಮಿ</u>
<u>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) ಅವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 981</u>

**2018-19 ರಿಂದ 2022-23 ರವರೆಗೆ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಅಂಶದಾನ ಹಾಗೂ ಕಲ್ಯಾಣ ಯೋಜನೆಗಳ ವೆಚ್ಚಗಳ ವಿವರಗಳು ಈ ಕೆಳಕಂಡಂತಿದೆ.**

| ಕ್ರ.ಸಂ. | ವರ್ಷ | ನಿಗದಿಪಡಿಸಿದ ವಾರ್ಷಿಕ ಅಂಶದಾನ (ರೂ. ಲಕ್ಷಗಳಲ್ಲಿ) | ಬಿಡುಗಡೆಯಾದ ವಾರ್ಷಿಕ ಅಂಶದಾನ (ರೂ. ಲಕ್ಷಗಳಲ್ಲಿ) | ವೆಚ್ಚಗಳು (ರೂ. ಗಳಲ್ಲಿ) |
|---|---|---|---|---|
| 1. | 2018-19 | 500.00 | 500.00 | 8,74,96,011 |
| 2. | 2019-20 | 718.00 | 718.00 | 10,65,03,252 |
| 3. | 2020-21 | 600.00 | 600.00 | 6,28,16,000 |
| 4. | 2021-22 | 600.00 | 600.00 | 5,01,51,000 |
| 5. | 2022-23 | 500.00 | 500.00 | 13,40,47,381 |